382

ಮೈಸೂರ ಗಿಜಿತ.

ನಂ. 26. ಸರ್ಕಾರದಿಂದ ಫಾಯಿಷ್ ಆದ್ದು. ಸ್ಯ 1884.

ಬೆಂಗಳೂರು, ಶನಿವಾರ, ಜೂ. ತಾ. 28, ಸ್ಯ 1884.

ವಿಷಯ ಸೂಚಿಕೆ.

1ನೇ ಭಾಗ–ಮೈಸೂರು ಮಹಾರಾಜ ರಾಜಾಸಾಹೆಬ್ ಬಹದೂರವರ ದೀವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

2ನೇ ಭಾಗ–ರೆಸಿಡೆಂಟರು, ಚೀಫ್ ಜಡ್ಜೀಯವರು, ಸರ್ವೆ ವ ಸೆಟಿಲ್‌ಮೆಂಟ್ ಕಮ್ಮಿಷನರು, ಇನಾಂ ಸೂಪರ್‌ಟೆಂಡೆಂಟರು, ಕಾಂಟ್ರೋಲರವರು, ಮಣಿ ಆರ್ಡರ್ ಕಂಟ್ರೋಲರ್, ಪಬ್ಲಿಕ್ ವರ್ಕ್‌ಸ್ ಆಫೀಸರ್‌ಗಳು, ಮಿಲಿಟೇರಿ ಸಿಕ್ರಿಟೆರಿಯವರು, ರಿಜಿಸ್ಟ್ರೇಷನ್ ಇನ್‌ಸ್ಪೆಕ್ಟರ್ ಜನರಲ್ಲವರು, ವಿದ್ಯಾಶಾಲೆ ಡೈರೆಕ್ಟರು, ಅಂಜೇ ಬಕ್‌ಷೀರು, ಮ್ಯುನಿಸಿಪಲ್ ಬೋರ್ಡು ಪ್ರಸಿಡೆಂಟರು, ಡಿಸ್ಟ್ರಿಕ್ಟ್ ವ ಸೆಷ್ಷ ಜಡ್ಜೀರು, ಡಿ॥ ಡೆಪ್ಯೂಟಿ ಕಮ್ಮಿಷನರುಗಳು, ಸಬಾರ್ಡಿನೇಟ್ ಜಡ್ಜೀರು, ಪೋಲೀಸ್ ಸೂಪರ್‌ಟೆಂಡೆಂಟರು, ಇವರುಗಳಿಂದ ಕೊಡೋಣಾದ ಇಸ್ತಿಹಾರ್‌ಗಳು ವಗೈರೆ; ಕಾಲಸ್ಥಿತಿ ರಿಪೋರ್ಟುಗಳು; ಪೋಸ್ಟಾಫೀಸ್ ನೋಟೀಸುಗಳು.

3ನೇ ಭಾಗ–ಶ್ರೀಮ್ಮ ಮಹಾರಾಜ ರಾಜಾಸಾಹೇಬ್ ಬಹದೂರವರಿಂದ ಮಂಜೂರ್ಮಾಡಲ್ಪಟ್ಟ ಆಕ್ಟುಗಳು ವ ರೆಗ್ಯುಲೇಷ್ಷನ್‌ಗಳು, 1884ನೇ ಇಸವಿಯ IIನೇ ರೆಗ್ಯೂಲೇಷ್ಷ.

4ನೇ ಭಾಗ–ಸರ್ಕಾರೀ ಕಾಗದ ಪತ್ರಗಳು—ಇಲ್ಲಾ.

1ನೇ ಭಾಗ.

ಶ್ರೀಮನ್ಮಹಾರಾಜ ರಾಜಾಸಾಹೇಬರವರ ದೀವಾನರವರಿಂದ ಕೊಡೋಣಾದ ಇಸ್ತಿಹಾರ್‌ನಾಮೆಗಳು.

ಜನರಲ್.

ಇಸ್ತಿಹಾರ್‌ನಾಮೆಗಳು.

ತಾರೀಖು 17ನೇ ಜೂ ೯ 1884.

ನಂ. 56.—ಮೈಸೂರು ಸ್ಟೇಟ್ ರೈಲ್‌ವೆ ಇಲಾಖಾ ಯಗ್ಜಿಕ್ಯೂಟಿವ್ ಇರಿಜನಿಯರ್ ಮೆ॥ ಟ. ಇರ್ಮೆಯವರಿಗೆ ಅವರು ಉಪಯೋಗಿಸಿಕೊಂಡ ತಾರೀಖು ಲಾಗಾಯತು ಮೂರು ತಿಂಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತೆ.

ನಂ. 57.—ಮೈಸೂರು ಡಿಸ್ಟ್ರಿಕ್ಟು ಹೊಳೇನರಸೀಪುರ ತಾಲ್ಲೂಕಿನ ಇದರಡೀ ಕಂಡ ಗ್ರಾಮಗಳು ಹಾಸನದ ತಾಲ್ಲೂಕಿಗೂ ಹೊಳೇನರಸೀಪುರದ ತಾಲ್ಲೂಕಿಗೂ ಮಧ್ಯೆ ಸರಹದ್ದು ಲೈನ್ ಯೇಕವಾಗಿ ಇರುವ ಬಗ್ಗೆ ಕಡೂರು ಡಿಸ್ಟ್ರಿಕ್ಟು ಹಾಸನದ ತಾಲ್ಲೂಕಿಗೆ ವರ್ಗ ಮಾಡಲ್ಪಟ್ಟಿರುತ್ತೆ. ಚಿಕ್ಕನಪಳ್ಳಿ ಚಿಕ್ಕನಾಯಕನಹಳ್ಳಿ.

ತಾರೀಖು 18ನೇ ಜೂ॥ 1884.

ನಂ. 58.—ಇದದಡಿ ಕಂಡ ಮಾಜಿಸ್ಟ್ರೇಟರುಗಳು, ಕ್ರಿಮಿನಲ್ ಪ್ರೊಸಿಜ್ಯೂರ್ ಕೋಡಿನ 335ನೇ ಸೆಕ್ಷನಿನ ನಿಯಮವನ್ನು ನುಸರಿಸಿ, ಫಿರ್ಯಾದಿಗಳ ವ ಸಾಕ್ಷಿಗಳ ವಾಂಗ್ಮೂಲಗಳನ್ನು ಅವರ ಹೆಸರಿಗೆ ಸರಿಯಾಗಿ ಬರೆದಿರುವ ಭಾಷೆಗಳಲ್ಲಿ ಸ್ವದಸ್ತೂರು ತೆಗದುಕ್ಕೊಳ್ಳುವಂತೆ ನಿಯಮಿಸಲ್ಪಟ್ಟಿರುತ್ತಾರೆ:—

ಚಿತ್ರದುರ್ಗದ ಮೂರ್ತೇಳ್ ವ 2ನೇ ಕ್ಲಾಸ್ ಮಾಜಿಸ್ಟ್ರೇಟ್ ಶ್ರೀನಿವಾಸರಾಯರು. ಇಂಗ್ಲೀಷ್ ಭಾಷೆಯಲ್ಲಿ.

ಕೊರಟಗೆರೆ ಆಕ್ಟಿಂಗ್ ಡೆಪ್ಯೂಟಿ ಅಮಲ್ದಾರ್ ವ 3ನೇ ಕ್ಲಾಸ್ ಮಾಜಿಸ್ಟ್ರೇಟ್ ಶ್ಯಾಮರಾಯರು. ಕನ್ನಡ ಭಾಷೆಯಲ್ಲಿ.

ತಾರೀಖು 20ನೇ ಜೂ॥ 1884.

ನಂ. 59.—ತುಮಕೂರು ಡಿಸ್ಟ್ರಿಕ್ಟ್ ಜನರಲ್ ಅಸಿಸ್ಟೆಂಟ್ ಕಮ್ಮಿಷನರ್ ಮೆ॥ ಬಿ. ಜಿ. ಕೃಷ್ಣಯ್ಯಂಗಾರ್ರಿಗೆ, 1884ನೇ ಇಸವಿ 18ನೇ ಮೇ 26ನೇ ನಂಬರ್ ವುಳ್ಳ ಈ ಆಫೀಸು ಇಸ್ತಿಹ್ತಾರ್‌ನಾಮೆಯಿಂದ ಕೊಡಲ್ಪಟ್ಟ ರಜಾಕ್ಕೆ ಜಾಸ್ತಿಯಾಗಿ 15 ದಿವಸಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತೆ.

ನಂ 60.—ಮೈಸೂರು ಡಿಸ್ಟ್ರಿಕ್ಟಿನ ಡಿಸ್ಟ್ರಿಕ್ಟ್ ವ ಸೆಷನ್ ಜಡ್ಜ್‌ರಾದ ಮೆ॥ ವಿ. ರ್ಯ. ನರಸಿಹ್ಮಯ್ಯಂಗಾರ್ರಿಗೆ, ಅವರು ಉಪಯೋಗಿಸಿಕೊಂಡ ತಾರೀಖು ಲಾಗಾಯತು 15 ದಿವಸಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 26ನೇ ಜೂ॥ 1884.

ನಂ. 61.—ಚಿಕ್ಕಮಗ್ಗಳೂರು ಡಿಸ್ಟ್ರಿಕ್ಟ್ ತೀರ್ಥಹಳ್ಳಿ ತಾಲ್ಲೂಕು ಅಮಲ್ದಾರ್ ತಿರುಮಲಾಚಾರ್ರಿಗೆ ಅವರು ಉಪಯೋಗಿಸಿಕೊಳ್ಳುವ ತಾರೀಖು ಲಾಗಾಯಿತು ಒಂದು ತಿಂಗಳ ಪ್ರಿವಿಲೀಜ್ ರಜಾ ಕೊಡಲ್ಪಟ್ಟಿರುತ್ತೆ.

ತಾರೀಖು 21ನೇ ಮಾರ್ಚ್ 1883.

ನಂ. 84.—ಕಾರ್ಯಾರ್ಥ ದೀವಾನರವರನ್ನು ಭೇಟೀ ಮಾಡುವದಕ್ಕೆ ಅಪೇಕ್ಷಿಸುವ ದೊಡ್ಡ ಮನುಷ್ಯರು ಮಂಗಳವಾರಗಳಲ್ಲಿ ಮಧ್ಯಾನ್ಹಾತ್ಪರ 3 ಘಂಟೆಗೆ ಕಛೇರಿಗೆ ಬರತಕ್ಕದ್ದು. ಈ ಬಗ್ಗೆ ಹಿಂಬಿನ ದಿನ ಸೆಕ್ರಟೇರಿಯವರಿಗೆ ತಮ್ಮ ಕಾರ್ಡ್‌ಗಳನ್ನು ಕಳುಹಿಸತಕ್ಕದ್ದು.

2. ಅರ್ಜಿದಾರರು ಶುಕ್ರವಾರಗಳ ದಿನ ಮಧ್ಯಾನ್ಹಾತ್ಪರ 3 ಘಂಟೆಗೆ ಕಛೇರಿಯಲ್ಲಿ ಕೇಳಲ್ಪಡುವರು.

ಬಹೋಜೀಬ ಹುಕ್ಕುಂ,

ಆರ್. ವಿಜಯಾಂದ್ರರಾವ್,

ಸೆಕ್ರಟೇರಿ.